# ಕನ್ನಡ ಪೋಸ್ಟ್

KANNADA POST | ಇದು ಸುದ್ದಿ ವಿಲಾಸ | ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 26 | Pages. 2 | Date: 23-12-2025, TUESDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 26 – ಪುಟಗಳು : 2 | 23-12-2025 | ಮಂಗಳವಾರ | Ph: 8762954248 | ದರ : ₹1


## ಬರದ ನಾಡಿನಲ್ಲಿ ಮಲೆನಾಡು ಸೃಷ್ಟಿಸಿದ ಸಾವಯುವ ಕೃಷಿಕ

– ಶ್ರೀನಿವಾಸ್ ಉಳ್ಳಾವಳ್ಳಿ

ಚನ್ನರಾಯಪಟ್ಟಣ: ಕೃಷಿಕರೊಬ್ಬರು ಸತತ ಪರಿಶ್ರಮ ಹಾಗೂ ಹೊಸ ಪ್ರಯತ್ನಗಳಿಂದ ಬರದ ಭೂಮಿಯಲ್ಲಿ ಮಲೆನಾಡಿನ ಬೆಳೆಗಳನ್ನು ಬೆಳೆದು ಯಶಸ್ಸು ಕಂಡಿದ್ದಾರೆ.

ಚನ್ನರಾಯಪಟ್ಟಣ ತಾಲ್ಲೂಕಿನ ಚಿಕ್ಕ ಸೋರೆಕಾಯಿಪುರ ಗ್ರಾಮದ ಅಣ್ಣೇಗೌಡ (ಮೂರ್ತಿ) ಅವರೇ ಸಾವಯವ ಹಾಗೂ ಸಮಗ್ರ ಕೃಷಿ ಅನುಸರಿಸಿ ಹೆಚ್ಚು ಲಾಭ ಗಳಿಸುವ ಮೂಲಕ ಯುವ ಸಮುದಾಯಕ್ಕೆ ಮಾದರಿಯಾಗಿರುವ ಪ್ರಗತಿಪರ ಕೃಷಿಕ.







ತಮಗಿರುವ 3 ಎಕರೆ ಜಮೀನಿನಲ್ಲಿ 100 ತೆಂಗಿನ ಮರಗಳು, 300 ಅಡಿಕೆ ಮರ, ಏಲಕ್ಕಿ, ಮೆಣಸು, ಸಪೋಟ, ದಾಳಿಂಬೆ, ಸ್ಟಾರ್ ಫ್ರೂಟ್, ಬಟರ್ ಫ್ರೂಟ್, ವಾಟರ್ ಆಪಲ್, ಸೀಬೆ, ನಿಂಬೆ ಸೇರಿದಂತೆ ವಿವಿಧ ಬಗೆಯ ಹಣ್ಣಿನ ಗಿಡಗಳನ್ನು ಬೆಳೆಸಿದ್ದು ಪುಟ್ಟ ಬಾಳೆ, ಪಚ್ಚ ಬಾಳೆ, ರಸಬಾಳೆ, ಬೂದು ಬಾಳೆ ಹಾಗೂ ಕೆಂಪು ಬಾಳೆ ಸೇರಿದಂತೆ ವಿವಿಧ ಪ್ರಭೇದದ ಎಂಟು ತಳಿಯ ಬಾಳೆ ಬೆಳೆದಿದ್ದಾರೆ.

ತಮ್ಮ ಜಮೀನಿನ ಎಲ್ಲಾ ಬೆಳೆಗಳಿಗೂ ಹನಿ ನೀರಾವರಿ ಪದ್ಧತಿ ಅಳವಡಿಸಿ ನೀರಿನ ಅಪವ್ಯಯ ತಪ್ಪಿಸಿದ್ದಾರೆ. ಹತ್ತು–ಹನ್ನೆರಡು ವರ್ಷಗಳಿಂದ ಯಾವುದೇ ರಾಸಾಯನಿಕ ಗೊಬ್ಬರ ಹಾಗೂ ಔಷಧ ಬಳಸದೆ ಸಾವಯವ ಕೃಷಿ ಅನುಸರಿಸುತ್ತಿದ್ದಾರೆ.

ಮನೆಯ ಮುಂಭಾಗದ 3 ಗುಂಟೆ ಜಾಗದಲ್ಲಿ ಕೈದೋಟ ಮಾಡಿದ್ದಾರೆ. ಅಲ್ಲಿಯೇ ಮನೆ ಬಳಕೆಗೆ ಬೇಕಾಗುವಷ್ಟು ಸೊಪ್ಪು ಹಾಗೂ ತರಕಾರಿಗಳನ್ನು ಬೆಳೆದುಕೊಳ್ಳುತ್ತಾರೆ.

ಮೂರು ಎಮ್ಮೆಗಳು, ನಾಲ್ಕು ನಾಟಿ ಹಸುಗಳು ಹಾಗೂ 25 ಕ್ಕೂ ಹೆಚ್ಚು ಮೇಕೆಗಳನ್ನು ಸಾಕಿದ್ದು ತಮ್ಮ ಜಮೀನಿಗೆ ಸಾಕಾಗುವಷ್ಟು ಕೊಟ್ಟಿಗೆ ಗೊಬ್ಬರವನ್ನು ಪಡೆಯುತ್ತಿದ್ದಾರೆ. ಅನಿವಾರ್ಯ ಇದ್ದಲ್ಲಿ ವರ್ಷದಲ್ಲಿ ಒಂದೆರಡು ಬಾರಿ



ಬೇರೆ ರೈತರಿಂದ ತಿಪ್ಪೆ ಗೊಬ್ಬರ ಖರೀದಿಸಿ ಬೆಳೆಗಳಿಗೆ ನೀಡುವ ವ್ಯವಸ್ಥೆ ಮಾಡಿಕೊಂಡಿದ್ದಾರೆ.

ಹತ್ತು ವರ್ಷಗಳ ಹಿಂದೆ ಯಾವುದೇ ಬೆಳೆಗಳಿಂದ ಹೆಚ್ಚು ಲಾಭ ಸಿಗುತ್ತಿರಲಿಲ್ಲ. ಆದರೆ ಸಾವಯುವ ಕೃಷಿ ಅನುಸರಿಸಿದ ನಂತರ ಎಲ್ಲಾ ಬೆಳೆಗಳಲ್ಲಿಯೂ ಹೆಚ್ಚಿನ ಇಳುವರಿಯೊಂದಿಗೆ ಸಾಕಷ್ಟು ಲಾಭ ಸಿಗುತ್ತದೆ ಎನ್ನುತ್ತಾರೆ ರೈತ ಅಣ್ಣೇಗೌಡ.

## ಮೆಕ್ಕೆ ಜೋಳ: ಅನ್ನದಾತರಿಗೆ ಶಾಪವಾದ ಕೆಎಂಎಫ್

### ಬೆಂಬಲ ಬೆಲೆ ಪ್ರಕ್ರಿಯೆಗೆ ಕಿಮ್ಮತ್ತಿಲ್ಲ | ಮಾಜಿ ಸಚಿವ ರೇವಣ್ಣ ಆಕ್ರೋಶ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಬೆಂಬಲ ಬೆಲೆಯಡಿ ಮೆಕ್ಕೆಜೋಳ ಖರೀದಿಸುವಂತೆ ಸರ್ಕಾರ ಆದೇಶಿಸಿದ್ದರೂ ಕೆಎಂಎಫ್ ನಿರ್ಲಕ್ಷ್ಯ ವಹಿಸಿ ಅನ್ನದಾತರ ಜೀವದೊಂದಿಗೆ ಚೆಲ್ಲಾಟವಾಡುತ್ತಿದೆ ಎಂದು ಮಾಜಿ ಸಚಿವ ಹೆಚ್.ಡಿ. ರೇವಣ್ಣ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಈ ಬಾರಿ ಹೆಚ್ಚು ಮಳೆಯಿಂದ ಶೇ.50 ರಷ್ಟು ಮೆಕ್ಕೆ ಜೋಳ ನಷ್ಟವಾಗಿದ್ದು, ರೈತರು ಸಂಕಷ್ಟದ ಪರಿಸ್ಥಿತಿಯಲ್ಲಿದ್ದಾರೆ. ರೈತಪರ ನಿಲ್ಲಬೇಕಾದುದು ರಾಜ್ಯ ಸರ್ಕಾರದ ಆದ್ಯ ಕರ್ತವ್ಯ, ಆದರೆ ಈ ಸರ್ಕಾರ ಖಾಸಗಿಯವರಿಗೆ ಅನುಕೂಲವಾಗಿವ ರೀತಿ ನಡೆದುಕೊಳ್ಳುತ್ತಿದೆ. ಸರ್ಕಾರ ಒಂದು ಕಡೆ ಖರೀದಿಗೆ ಸೂಚಿಸಿ ಮತ್ತೊಂದೆಡೆ ಸ್ಥಗಿತಗೊಳಿಸಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೆಎಂಎಫ್ ವತಿಯಿಂದ ಖಾಸಗಿಯವರ ಬಳಿ ಈಗಾಗಲೇ 29 ಸಾವಿರ ಮೆಟ್ರಿಕ್ ಟನ್ ಮೆಕ್ಕೆಜೋಳ ಖರೀದಿ ಮಾಡಿದ್ದಾರೆ. ಆದರೆ ರೈತರ ಬಳಿ ಕೇವಲ 10 ಸಾವಿರ ಮೆಟ್ರಿಕ್ ಟನ್ ಖರೀದಿ ಮಾಡಲು ಮುಂದಾಗಿದ್ದಾರೆ. ಈ ತಾರತಮ್ಯ



ನಿಲ್ಲಬೇಕು ಎಂದು ಒತ್ತಾಯಿಸಿದರು.

ನಾನು ಕೆಎಂಎಫ್ ಅಧ್ಯಕ್ಷನಾಗಿದ್ದಾಗ ಖಾಸಗಿಯವರನ್ನು ಹತ್ತಿರ ಕೂಡ ಸುಳಿಯಲು ಬಿಟ್ಟಿರಲಿಲ್ಲ. ಖಾಸಗಿ ಪಶು ಆಹಾರ ಘಟಕಗಳನ್ನು ಮುಚ್ಚಿಸಿದ್ದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಸಹಕಾರಿ ಸಚಿವರಾಗಿರುವುದರಿಂದ ಕ್ವಿಂಟಾಲ್‌ಗೆ 2,400 ರೂ.ನಂತೆ ರೈತರಿಂದಲೇ ಮೆಕ್ಕೆ ಜೋಳ ಖರೀದಿ ಮಾಡಬೇಕು ಜೊತೆಗೆ ಪಶು ಆಹಾರಕ್ಕೆ ಅಗತ್ಯವಿರುವ ವಸ್ತುಗಳನ್ನು ನೇರವಾಗಿ ರೈತರಿಂದಲೇ ಖರೀದಿ ಮಾಡಬೇಕು ಎಂದು ಒತ್ತಾಯಿಸಿದರು.

**ಖಾಸಗಿಯವರ ಹಾವಳಿ ತಪ್ಪಿಸಿ**

ಸರ್ಕಾರ ಇನ್ನಾದರೂ ಖಾಸಗಿಯವರಿಂದ ಮೆಕ್ಕೆ ಜೋಳ ಖರೀದಿಸುವ ಬದಲು ರೈತರಿಂದಲೇ ನೇರವಾಗಿ ಖರೀದಿಸಲು ಏನು ಸಮಸ್ಯೆ ಎಂದು ಪ್ರಶ್ನಿಸಿದ ಅ ಖಾಸಗಿಯವರು ಒಂದೂವರೆ ತಿಂಗಳ ಹಿಂದೆಯೇ ರೈತರಿಂದ ಒಂದೂವರೆ ಸಾವಿರಕ್ಕೆ ಖರೀದಿಸಿ ಈಗ 2500 ರೂ. ಗಳಿಗೆ ಕೆಎಂಎಫ್ ಗೆ ಮಾರಾಟ ಮಾಡುತ್ತಿದ್ದಾರೆ. ಕೃಷಿ ಅಧಿಕಾರಿಗಳು, ಜಿಲ್ಲಾಧಿಕಾರಿಗಳು ಏನು ಮಾಡುತ್ತಿದ್ದಾರೆ ಎಂದು ರೇವಣ್ಣ ಪ್ರಶ್ನಿಸಿದರು.

ಜಿಲ್ಲೆಯಲ್ಲಿ ಹಿಂದೆ ಸುಮಾರು 3 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಆಲೂಗೆಡ್ಡೆ ಬೆಳೆಯುತ್ತಿದ್ದರು. ನಾನು ಕೂಡ 40 ಎಕರೆಯಲ್ಲಿ ಬೆಳೆಯುತ್ತಿದ್ದೆ, ಇಂದು ಮಳೆ ಹೆಚ್ಚಾಗಿ ತೇವಾಂಶ ಹೆಚ್ಚಾಗಿ ಅಂಗಮಾರಿ ರೋಗ ಬಂದ ಕಾರಣಕ್ಕೆ ಇಂದು ಕೇವಲ ಏಳೆಂಟು ಸಾವಿರ ಹೆಕ್ಟೇರ್ ಪ್ರದೇಶಕ್ಕೆ ಇಳಿದಿದೆ.

ಈ ಬಾರಿ ಜಿಲ್ಲೆಯಲ್ಲಿ 2.20 ಲಕ್ಷ ಹೆಕ್ಟೇರ್‌ನಲ್ಲಿ ಮೆಕ್ಕೆಜೋಳ ಬೆಳೆದಿದ್ದಾರೆ. ರೈತರಿಗೆ ಸರಿಯಾದ ಬೆಲೆ ಸಿಗುತ್ತಿಲ್ಲ ಎಂದು ಆರೋಪಿಸಿದರು.

ಜಿಲ್ಲಾಧಿಕಾರಿ ಅವರು ನಿತ್ಯ ಕೇವಲ ಮೀಟಿಂಗ್ ಮಾಡುವುದರಲ್ಲೇ ಬ್ಯುಸಿಯಾಗಿದ್ದಾರೆ. ಯಾವ ಅಧಿಕಾರಿಗಳನ್ನು ಕೇಳಿದರು ಡಿಸಿ ಮೀಟಿಂಗ್ ನಲ್ಲಿದ್ದೇನೆ ಎಂದು ಹೇಳುತ್ತಾರೆ. ಆದರೆ ಅಭಿವೃದ್ಧಿ ಮಾತ್ರ ಆಗುತ್ತಿಲ್ಲ ಎಂದು ಕಿಡಿಕಾರಿದರು.

ಇದೇ ವೇಳೆ ಯಗಚಿ–ಕಾಮಸಮುದ್ರ ನಾಲೆ ಕೆಲಸ ಪೂರ್ಣಗೊಳ್ಳದ ಕಾರಣ

8 ಸಾವಿರ ಎಕರೆ ಪ್ರದೇಶಕ್ಕೆ ನೀರಾವರಿ ಆಗುತ್ತಿಲ್ಲ. ಮುಖ್ಯಮಂತ್ರಿ ಅವರು ಈ ಕಡೆ ಕಣ್ಣು ಬಿಡಿ, ಎತ್ತಿನಹೊಳೆ, ಮೇಕೆದಾಟು ಆಮೇಲೆ ಮಾಡಿಕೊಳ್ಳಿ. ಭೂ ಸ್ವಾಧೀನ ಪ್ರಕ್ರಿಯೆ ಅಪೂರ್ಣಗೊಂಡಿರುವುದರಿಂದ ರೈತರಿಗೆ ತೊಂದರೆಯಾಗುತ್ತಿದೆ. ಭೂ ಸ್ವಾಧೀನಕ್ಕೆ ಅಗತ್ಯವಿರುವ ಅನುದಾನವನ್ನು ಶೀಘ್ರ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯಲ್ಲಿ ಮತ್ತೆ ಹೃದಯಾಘಾತ ಪ್ರಕರಣಗಳು ಹೆಚ್ಚುತ್ತಿದ್ದು ಭಾನುವಾರ ಕೂಡ ಇಬ್ಬರೂ ಹೃದಯಾಘಾತಕ್ಕೆ ಇಬ್ಬರು ಸಾವನಪ್ಪಿದ್ದಾರೆ. ಕೂಡಲೇ ಹಿಮ್ಸ್ ನಲ್ಲಿ ಕಾರ್ಡಿಯಾಲಜಿ ಘಟಕ ತೆರೆಯುವಂತೆ ಒತ್ತಾಯಿಸಿದರು.

## ಪಾನಮತ್ತ ಶಿಕ್ಷಕ ಕೊನೆಗೂ ಅಮಾನತು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ನಿತ್ಯ ಮದ್ಯ ಸೇವಿಸಿ ಶಾಲೆಗೆ ಬಂದು ವಿದ್ಯಾರ್ಥಿಗಳಿಗೆ ಹಿಂಸೆ ನೀಡುತ್ತಿದ್ದ ತಾಲ್ಲೂಕಿನ ಸೋರೆಕಾಯಿಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕ ಹರೀಶ್ ಅವರನ್ನು ಸೇವೆಯಿಂದ ಅಮಾನತು ಮಾಡಲಾಗಿದೆ. ಡಿ.8 ರಂದು ಶಿಕ್ಷಕ ಮತ್ತು ಆತನ ಪತ್ನಿ ಶಾಲೆಗೆ ಬಂದು ವಿದ್ಯಾರ್ಥಿಗಳನ್ನು ಥಳಿಸಿದ್ದರು. ಈ ಬಗ್ಗೆ ಗ್ರಾಮಸ್ಥರು ಕ್ಷೇತ್ರ ಶಿಕ್ಷಣಾಧಿಕಾರಿಗೆ ದೂರು ನೀಡಿದ್ದರು. ಸಿಆರ್ ಪಿ ಮತ್ತು ಶಿಕ್ಷಣ ಸಂಯೋಜಕರು ಪ್ರಕರಣದ ಬಗ್ಗೆ ನೀಡಿರುವ ವರದಿ, ವಿದ್ಯಾರ್ಥಿಗಳ ಹೇಳಿಕೆ ಆಧರಿಸಿ ಹಾಗೂ ಕರ್ತವ್ಯ ಸಮಯದಲ್ಲಿ ಮದ್ಯಪಾನ ಮಾಡಿರುವುದಾಗಿ ಶಿಕ್ಷಕನೇ ಒಪ್ಪಿದ ಹಿನ್ನೆಲೆಯಲ್ಲಿ ಅಮಾನತು ಮಾಡಲಾಗಿದೆ.

## ಹೊಳೆನರಸೀಪುರದಲ್ಲಿ ಅರ್ಥಪೂರ್ಣ ಆಳ್ವಾಸ್ ವೈಭವ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹೊಳೆನರಸೀಪುರ: ಮೂಡಬಿದರೆಯ ಆಳ್ವಾಸ್ ನುಡಿಸಿರಿ ಸಾಂಸ್ಕೃತಿಕ ವೈಭವ ಪ್ರತಿಷ್ಠಾನದವರು ದೇಶದೆಲ್ಲೆಡೆ ನಡೆಸುವ ಸಾಂಸ್ಕೃತಿಕ ಕಾರ್ಯಕ್ರಮಗಳು ಜನ ಮೆಚ್ಚುಗೆ ಪಡೆದಿವೆ ಎಂದು ಸಂಸದ ಶ್ರೇಯಸ್ ಪಟೇಲ್ ತಿಳಿಸಿದರು.

ಪಟ್ಟಣದ ಬಯಲು ರಂಗ ಮಂದಿರದ ಆವರಣದಲ್ಲಿ ಸಂಸದರ ಸಾರಥ್ಯದಲ್ಲಿ ಆಯೋಜಿಸಿದ್ದ ಸಾಂಸ್ಕೃತಿಕ ವೈಭವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಜೊತೆಗೆ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರ ಮೂಲಕ ಮನಸ್ಸಿಗೆ ನೆಮ್ಮದಿ ಮತ್ತು ಸಂತೋಷ ಪಡೆಯಬೇಕು ಎಂದರು.

ಆಗ ಮಾತ್ರ ಶೈಕ್ಷಣಿಕ ಕ್ಷೇತ್ರದ ಪ್ರಗತಿ ಜೊತೆಗೆ ಸಾಂಸ್ಕೃತಿಕ ಜಗತ್ತಿನಲ್ಲಿ ತಮ್ಮ ಪ್ರತಿಭೆ ಪ್ರದರ್ಶಿಸಲು ಅವಕಾಶ ಸಿಕ್ಕಂತಾಗುತ್ತದೆ. ಪ್ರತಿಭೆ ನೋಡಿ ಆನಂದಿಸುವ ಪ್ರೇಕ್ಷಕರು ತಮಗೆ ಆಶೀರ್ವಾದ ಮಾಡುವುದೇ ನೆಮ್ಮದಿ ಬದುಕಿಗೆ ಶ್ರೀರಕ್ಷೆಯಾಗಲಿದೆ ಎಂದು ನುಡಿದರು.



ಆಳ್ವಾಸ್ ಸಂಸ್ಥೆ ಮುಖ್ಯಸ್ಥ ಮೋಹನ್ ಆಳ್ವ ಅಧ್ಯಕ್ಷತೆ ವಹಿಸಿ ಮಾತನಾಡಿ, ಈ ತಾಲೂಕಿನಲ್ಲಿ ನಮ್ಮ ಸಂಸ್ಥೆಯಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಲು ಹಲವಾರು ವರ್ಷಗಳಿಂದಲೂ ಪ್ರಯತ್ನ ಮಾಡಿ ವಿಫಲವಾಗಿದ್ದವು. ಅಂತಹ ಒಂದು ಅವಕಾಶ ಒದಗಿಸಿ ಕೊಟ್ಟಿರುವ ಶ್ರೇಯಸ್ ಪಟೇಲ್ ಅವರ ಸಹಕಾರಕ್ಕೆ ನಮ್ಮ ಸಂಸ್ಥೆ ಸದಾ ಋಣಿಯಾಗಿರುತ್ತದೆ ಎಂದರು.

ಸಂಸದರು ಆರಂಭದಿಂದ ಈವರೆಗೂ ಸಂಸತ್ ಅಧಿವೇಶನದಲ್ಲಿ ಹಾಸನ ಜಿಲ್ಲೆಯ ಸಮಗ್ರ ಅಭಿವೃದ್ಧಿ ಸೇರಿ ಹಲವು ಗುರುತರ ಸಮಸ್ಯೆ ಹಾಗೂ ಬೇಡಿಕೆ ಕುರಿತು ಸಂಬಂಧಪಟ್ಟವರ ಗಮನ ಸೆಳೆದು ಎಲ್ಲರಿಗೂ ಮಾದರಿ ಆಗಿದ್ದಾರೆ ಎಂದರು. ಇಂತಹ ಸಂಸದರನ್ನು ತಾವು ಪಡೆದಿರುವುದು ಪುಣ್ಯ. ಸರಳ, ಸಜ್ಜನಿಕೆ, ಉದಾರತೆ ಮನಸ್ಸಿನ ಯುವ ಸಂಸದರಿಗೆ ತಮ್ಮ ಆಶೀರ್ವಾದ ಸದಾ ಇರಲಿ ಎಂದು ಆಶಿಸಿದರು.

ಸುಮಾರು 350ಕ್ಕೂ ನಮ್ಮ ಹಾಗೂ ಪಕ್ಕದ ರಾಜ್ಯಗಳ ವಿದ್ಯಾರ್ಥಿಗಳು ಪ್ರದರ್ಶನ ನೀಡಲಿದ್ದು, ಇಂತಹ ಐತಿಹಾಸಿಕ ಕಾರ್ಯಕ್ರಮದಲ್ಲಿ ಪೂರ್ಣ ಪ್ರಮಾಣದಲ್ಲಿ ತಾವು ಪಾಲ್ಗೊಳ್ಳುವುದರ ಮೂಲಕ ಸಾಂಸ್ಕೃತಿಕ ವೈಭವದ ಹಬ್ಬದ ಸಂಭ್ರಮದಲ್ಲಿ ಪಾಲ್ಗೊಳ್ಳಬೇಕೆಂದು ಕರೆ ನೀಡಿದರು.

ಮೈ ನಡುಗಿಸುವ ಚಳಿ ನಡುವೆ, ಸಂಘ ಸಂಸ್ಥೆಗಳ ಪ್ರಮುಖರು, ಅಧಿಕಾರಿಗಳು, ವಿದ್ಯಾರ್ಥಿ–ವಿದ್ಯಾರ್ಥಿನಿಯರು ಸೇರಿ ಸುಮಾರು 8 ಸಾವಿರಕ್ಕೂ ಹೆಚ್ಚು ಪ್ರೇಕ್ಷಕರು ಪಾಲ್ಗೊಂಡು ನೃತ್ಯ ನೋಡಿ ಆನಂದಿಸಿದರು. ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಪ್ರಸನ್ನ ಕುಮಾರ್ ನಿರೂಪಿಸಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಚ್.ಟಿ.ಲಕ್ಷ್ಮಣ ಸ್ವಾಗತಿಸಿದರು.

## ಶಾಂತಲಾ ಮಹೋತ್ಸವಕ್ಕೆ ಅದ್ದೂರಿ ಚಾಲನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಳೇಬೀಡು: ಶಾಂತಲಾ ಮಹೋತ್ಸವ ಅಂಗವಾಗಿ ಹಳೇಬೀಡಿನಲ್ಲಿ ವೈಭವದ ಮೆರವಣಿಗೆ ನಡೆಯಿತು.

ಕಲ್ಪತರು ಶಾಲೆ ಆವರಣದಿಂದ ಆರಂಭವಾದ ಮೆರವಣಿಗೆಯಲ್ಲಿ ಕಲಾತಂಡಗಳು ಭಾಗವಹಿಸಿ, ಜನರಿಗೆ ರಸದೌತಣ ಉಣಬಡಿಸಿದರು. ಗಾರುಡಿಗ ಗೊಂಬೆ, ಜೋಕರ್ ಗೊಂಬೆ, ಡೊಳ್ಳು ಕುಣಿತ, ಚಂಡೆ ವಾದನ, ನಂದಿ ಧ್ವಜ ಕುಣಿತ ಮೊದಲಾದ ಜನಪದ ಸೊಗಡಿನ ಮೆರವಣಿಗೆಯಲ್ಲಿ ಸಾಗಿದ ಕಲಾ ತಂಡಗಳು ವಿವಿಧ ಭಂಗಿಯ ಪ್ರದರ್ಶನದೊಂದಿಗೆ ಹೆಜ್ಜೆ ಹಾಕಿ ಸಾಗಿದವು.



ಕಲಾ ಪ್ರದರ್ಶನಗಳು ರಸ್ತೆಯ ಇಕ್ಕೆಲಗಳಲ್ಲಿ ವೀಕ್ಷಿಸುತ್ತಿದ್ದ ಜನರ ಮನ ಸೆಳೆದವು. ರಾಜಗೆರೆ ಶಿವಣ್ಣ, ಅರಸೀಕೆರೆ ಬೋರನಹಳ್ಳಿಯ ಶ್ರೀರಾಮ ಯುವಕ ಸಂಘದ ಗೊಂಬೆ ಕುಣಿತ ಜನರನ್ನು ರಂಜಿಸಿದವು. ನಂದಿ ಧ್ವಜ ಕುಣಿತ ಭಕ್ತಿ ಭಾವ ಮೂಡಿಸಿತು.

ಬೇಲೂರಿನ ಟೀಂ ಅಭಿಮನ್ಯು ತಂಡದವರ ಡೊಳ್ಳಿನ ಸದ್ದು ಗಮನ ಸೆಳೆಯಿತು.

ಹೊಯ್ಸಳರ ಸ್ತಬ್ಧ ಚಿತ್ರ ಹಾಗು ಚಂಡೆ ವಾದನ ತಂಡ ಮನೆ ಮೋಹಕವಾಗಿತ್ತು. ಬೆಳ್ಳಿ ರಥದಲ್ಲಿ ಪುಷ್ಪಗಿರಿಯ ಸೋಮಶೇಖರ ಸ್ವಾಮೀಜಿ ಅವರ ಮೆರವಣಿಗೆ ನಡೆಯಿತು.

ಬೇಲೂರಿನ ಮಹೇಶಗೌಡ ಕೆಂಪೇಗೌಡ ವೇಷ ಧರಿಸಿ ಭಾಗವಹಿಸಿದ್ದರು. ಹಗರೆ ಗ್ರಾಮದ ಸಾಲುಮರದ ಸದಾಶಿವಯ್ಯ ಬಸವೇಶ್ವರ ವೇಷಧರಿಸಿ ಆಗಮಿಸಿದ್ದರು. ಪುಷ್ಪಗಿರಿ ಗ್ರಾಮಾಭಿವೃದ್ಧಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಸ್ವಸಹಾಯ ಸಂಘದ ಮಹಿಳಾ ಸದಸ್ಯರು ಮೆರವಣಿಗೆಯ ಮೆರುಗು ಹೆಚ್ಚಿಸಿದರು.

ಕಲಾ ತಂಡಗಳ ಮೆರವಣಿಗೆ ನಾಡಿನ ಕಲೆ ಸಂಸ್ಕೃತಿಯನ್ನು ಅನಾವರಣಗೊಳಿಸಿತು. ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ ಮೆರವಣಿಗೆಗೆ ಚಾಲನೆ ನೀಡಿದರು. ಮಾಜಿ ಶಾಸಕ ಕೆ.ಎಸ್.ಲಿಂಗೇಶ್, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಗ್ರಾನೈಟ್ ರಾಜಶೇಖರ್, ಕೃಷಿ ಪತ್ತಿನ ಸಂಘದ ಅಧ್ಯಕ್ಷ ಎಂ.ಕೆ. ಹುಲೀಗೌಡ, ಮುಖಂಡರಾದ ಮಲ್ಲಿಕಾರ್ಜುನ, ಶಿವಲಿಂಗೇಗೌಡ ಪಾಲ್ಗೊಂಡಿದ್ದರು.

## ಹಾಸನ ಬಳಿಕ ಆಲೂರಿಗೂ ಬಂತು ಹುಸಿ ಬಾಂಬ್ ಕರೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ಹಾಸನ ಜಿಲ್ಲಾಧಿಕಾರಿ ಕಚೇರಿ ಸ್ಫೋಟಿಸುವುದಾಗಿ ಕಳೆದ ಕೆಲ ದಿನಗಳ ಹಿಂದಷ್ಟೇ ರವಾನೆಯಾಗಿದ್ದ ಹುಸಿ ಬಾಂಬ್ ಕರೆ ಪಟ್ಟಣದ ಮಿನಿ ವಿಧಾನಸೌಧ ಕಚೇರಿಗೂ ಬಂದಿದ್ದು ಸೋಮವಾರ ಸೂಕ್ಷ್ಮ ಪರಿಶೀಲನೆ ನಡೆಸಲಾಯಿತು.

ತಾಲೂಕು ಕಚೇರಿಯ ಅಧಿಕೃತ ಇ–ಮೇಲ್‌ಗೆ ಬೆಳಗಿನ ಜಾವ 3.04 ನಿಮಿಷದಲ್ಲಿ ಗೈನ್ ರಮೇಶ್ ಎಂಬಾತನ ಹೆಸರಿನಲ್ಲಿ ಎರಡು ಆರ್‌ಡಿಎಕ್ಸ್ ಬಾಂಬ್ ಇಟ್ಟಿದ್ದು ಅದನ್ನು ಮಧ್ಯಾಹ್ನ 1ರ ಒಳಗೆ ಸ್ಫೋಟಿಸಲಾಗುವುದು ಎಂಬ ಸಂದೇಶ ಬಂದಿದೆ.

ಎಂದಿನಂತೆ ಸಿಬ್ಬಂದಿ ಕರ್ತವ್ಯಕ್ಕೆ ಹಾಜರಾಗಿ ಇ–ಮೇಲ್ ಪರಿಶೀಲಿಸಿದಾಗ ಬೆದರಿಕೆ ಸಂದೇಶ ಗೋಚರವಾಗಿದೆ. ಕೂಡಲೇ ತಹಸೀಲ್ದಾರ್ ಮಲ್ಲಿಕಾರ್ಜುನ ಅವರು ಆಲೂರು ಪೊಲೀಸರಿಗೆ ವಿಷಯ ತಿಳಿಸಿದರು. ತಾಲೂಕು ಕಚೇರಿಗೆ ಪೊಲೀಸರು ಧಾವಿಸಿ, ಭದ್ರತಾ ಕ್ರಮವಾಗಿ ಸಿಬ್ಬಂದಿ ಎಲ್ಲರನ್ನೂ ಹೊರಗೆ ಕಳುಹಿಸಿದರು.

ಬಳಿಕ ಬಾಂಬ್ ನಿಷ್ಕ್ರಿಯ ದಳ, ಶ್ವಾನದಳ ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ, ವಿದ್ಯುತ್ ಪೂರೈಕೆ ಸ್ಥಗಿತಗೊಳಿಸಿ ಸಂಪೂರ್ಣ ಕಟ್ಟಡದ ಸುದೀರ್ಘ ತಪಾಸಣೆ ನಡೆಸಿದರು. ಪರಿಶೀಲನೆ ವೇಳೆ ಯಾವುದೇ ಸ್ಫೋಟಕ ವಸ್ತುಗಳು ಪತ್ತೆಯಾಗಲಿಲ್ಲ ಎಂದು ಪೊಲೀಸರು ಸ್ಪಷ್ಟಪಡಿಸಿದರು.

ತಪಾಸಣೆ ಪೂರ್ಣಗೊಂಡ ಬಳಿಕ ತಹಸೀಲ್ದಾರ್ ಮಲ್ಲಿಕಾರ್ಜುನ ಅವರು ಪರಿಶೀಲನೆ ನಡೆಸಿ, ಸಿಬ್ಬಂದಿ ಆತಂಕವಿಲ್ಲದೆ ಕರ್ತವ್ಯಕ್ಕೆ ಮರಳುವಂತೆ ಸೂಚಿಸಿದರು. ಅದರಿಂದ ಎಲ್ಲರೂ ನಿಟ್ಟುಸಿರು ಬಿಟ್ಟರು. ಶಾಸಕ ಸಿಮೆಂಟ್ ಮಂಜು ಅವರು ಭೇಟಿ ನೀಡಿ, ತಹಸೀಲ್ದಾರ್ ಹಾಗೂ ಪೊಲೀಸ್ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಸರ್ಕಾರಿ ಕಚೇರಿಗಳಿಗೆ ನಿರಂತರವಾಗಿ ಬಾಂಬ್ ಬೆದರಿಕೆ ಇ–ಮೇಲ್‌ಗಳು ಬರುತ್ತಿರುವುದು ಗಂಭೀರ ವಿಷಯ. ಇಂತಹ ಚೆಲ್ಲಾಟದಿಂದ ಸಾರ್ವಜನಿಕರು ಹಾಗೂ ಸಿಬ್ಬಂದಿಗೆ ಪ್ರಾಣ ಸಂಕಟದ ವಾತಾವರಣ ನಿರ್ಮಾಣವಾಗುತ್ತಿದೆ. ಸರ್ಕಾರ ತಕ್ಷಣವೇ ಇದಕ್ಕೆ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿದರು. ಆಲೂರು ತಾಲೂಕು ಕಚೇರಿಯಲ್ಲಿ ಯಾವುದೇ ಸ್ಫೋಟಕ ವಸ್ತುಗಳಿಲ್ಲ ಎಂಬುದು ಸ್ಪಷ್ಟವಾಗಿದ್ದು, ಈಗ ಎಲ್ಲಾ ಸಿಬ್ಬಂದಿ ಸಹಜವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ತಿಳಿಸಿದರು.

ತಹಸೀಲ್ದಾರ್ ಮಲ್ಲಿಕಾರ್ಜುನ ಮಾತನಾಡಿ, ನಮ್ಮ ಅಧಿಕೃತ ಮೇಲ್‌ಗೆ ಬೆಳಗಿನ ಜಾವ ಸಂದೇಶ ಬಂದಿದ್ದು, ಪೊಲೀಸರ ಗಮನಕ್ಕೆ ತಂದು ಎಲ್ಲಾ ಪರಿಶೀಲನೆ ನಡೆಸಲಾಗಿದೆ. ಇದು ಹುಸಿ ಬಾಂಬ್ ಕರೆಯಾಗಿದೆ. ತಮಿಳುನಾಡಿನ ಡಿಐಜಿ ಸೇರಿದಂತೆ ಇನ್ನಿತರರಿಗೂ ಕೂಡ ಇದು ವರ್ಗಾವಣೆ ಆಗಿದೆ. ತಮಿಳುನಾಡಿನ ಕನ್ಯಾಕುಮಾರಿಯಲ್ಲಿ ಕೂಡ ಆಲೂರು ಎಂಬ ತಾಲೂಕು ಇದ್ದು ಅಲ್ಲಿಗೆ ಮಾಹಿತಿ ನೀಡಲಾಗುವುದು ಎಂದರು.

ಸಕಲೇಶಪುರ ಡಿವೈಎಸ್ಪಿ ಮಾಲತೇಶ್, ಪೊಲೀಸ್ ಇನ್ಸ್‌ಪೆಕ್ಟರ್ ಮೋಹನರೆಡ್ಡಿ ಮತ್ತು ಪೊಲೀಸ್ ಸಿಬ್ಬಂದಿ ಹಾಜರಿದ್ದರು.

## ಹಾಸನದಲ್ಲಿ ಹದಗೆಟ್ಟ ಸಂಚಾರ ವ್ಯವಸ್ಥೆ: ಹೋರಾಟದ ಎಚ್ಚರಿಕೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಹೊಸ ಬಸ್ ನಿಲ್ದಾಣ ಟರ್ಮಿನಲ್‌ನಿಂದ ಎನ್.ಆರ್. ಸರ್ಕಲ್ ವರೆಗೆ ಸಂಪರ್ಕ ಕಲ್ಪಿಸುವ ರೈಲು ಮೇಲ್ಸೇತುವೆ ನಿರ್ಮಾಣ ಬಳಿಕ ಎನ್. ಆರ್. ಸರ್ಕಲ್ ವ್ಯಾಪ್ತಿಯಲ್ಲಿ ಸಂಚಾರ ದಟ್ಟಣೆ ಹಾಗೂ ರಸ್ತೆ ಸುರಕ್ಷತಾ ಸಮಸ್ಯೆ ದಿನೇ ದಿನೆ ಹೆಚ್ಚುತ್ತಿದೆ ಎಂದು ನಗರಸಭೆ ಮಾಜಿ ಸದಸ್ಯ ಹೆಚ್.ಎಂ.ಸುರೇಶ್ ಕುಮಾರ್ ಆರೋಪಿಸಿದರು.




ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಅವೈಜ್ಞಾನಿಕ ರಸ್ತೆ ವಿನ್ಯಾಸ ಹಾಗೂ ಅಸಮರ್ಪಕ ಹೊಂದಾಣಿಕೆಯಿಂದಾಗಿ ವಾಹನ ಸವಾರರು ಮತ್ತು ಪಾದಚಾರಿಗಳು ನಿರಂತರ ಅಪಾಯದ ಮಧ್ಯೆ ಸಂಚರಿಸಬೇಕಿದೆ. ಅಕಸ್ಮಾತ್ ಮೈ ಮರೆತರೆ ಅಪಾರ ಗ್ಯಾರಂಟಿ ಎಂದು ಆತಂಕ ವ್ಯಕ್ತಪಡಿಸಿದರು.

ಆರ್‌ಒಬಿ ಇಳಿಜಾರಿನ ತುದಿ ಮತ್ತು ಸಮೀಪದಲ್ಲಿರುವ ಸಂಚಾರ ಸಿಗ್ನಲ್ ನಡುವಿನ ಅಂತರ ಅತ್ಯಂತ ಕಡಿಮೆ ಇದೆ. ಕೇವಲ 30 ಸೆಕೆಂಡ್‌ಗಳಲ್ಲಿ ಹೆಚ್ಚು ವಾಹನಗಳು ಹಾದು ಹೋಗುವುದು ಕಷ್ಟವಾಗಿದೆ. ಮೇಲ್ಸೇತುವೆಯಿಂದ ಇಳಿಯುವ ವಾಹನಗಳು ಏಕಾಏಕಿ ಬ್ರೇಕ್ ಹಾಕಿದರೆ ಕಷ್ಟವಾಗಲಿದೆ. ಈ ಬಗ್ಗೆ ಸ್ಥಳೀಯ ಜನಪ್ರತಿನಿಧಿಗಳು ಸೇರಿ ಎಲ್ಲರೂ ಮನವಿ ಮಾಡಿದರೂ, ಸಂಬಂಧಪಟ್ಟ ಅಧಿಕಾರಿಗಳು ಬಂದು ಪರಿಶೀಲನೆ ನಡೆಸಿಲ್ಲ ಎಂದು ಆರೋಪಿಸಿದರು.

ಸಮರ್ಪಕ ಬಫರ್ ಜಾಗದ ಕೊರತೆ, ಸಿಗ್ನಲ್ ದೃಶ್ಯದ ಕಡಿಮೆ ಅಂತರ, ಮುನ್ನೆಚ್ಚರಿಕೆ ಸೂಚನಾ ಫಲಕ ಅಳವಡಿಸದೇ ಇರುವುದು, ಅವೈಜ್ಞಾನಿಕ ಸಂಗಮ ವಿನ್ಯಾಸದಿಂದಾಗಿ ನಿತ್ಯ ಸಂಚಾರ ಕಿರಿಕಿರಿ ಮತ್ತು ಟ್ರಾಫಿಕ್ ಸಮಸ್ಯೆ ಉಂಟಾಗುತ್ತಿದೆ ಎಂದರು.

ಎನ್.ಆರ್. ಸರ್ಕಲ್‌ನಲ್ಲಿ ಸೇವಾ ರಸ್ತೆ ಮತ್ತು ಮುಖ್ಯ ರಸ್ತೆ (ಮೇನ್ ಕ್ಯಾರೇಜ್ ವೇ)ಗಳ ಸಂಗಮ ಸರಿಯಾದ ರೀತಿಯಲ್ಲಿ ಹೊಂದಾಣಿಕೆ ಆಗಿಲ್ಲ. ಸಂಗಮದ ಬಳಿ ನಿರ್ಮಿಸಲಾಗಿರುವ ಟೋ ವಾಲ್ (ಖಟಛಿ ಗಚ್ಝ) ಅಗತ್ಯಕ್ಕಿಂತ ಬಹಳ ಮುಂದಕ್ಕೆ ನಿರ್ಮಾಣಗೊಂಡಿರುವುದರಿಂದ, ರಸ್ತೆ ಅಗಲ ಏಕಾಏಕಿ ಕುಗ್ಗುತ್ತಿದೆ. ಇದರಿಂದ ವಾಹನ ಸವಾರರು ತಕ್ಷಣ ಹಾಗೂ ಅಪಾಯಕಾರಿ ತಿರುವು ಮತ್ತು ಲೇನ್ ಬದಲಾವಣೆ ಮಾಡುವಾಗ ಅಪಘಾತ ಸಂಭವಿಸುವ ಸಾಧ್ಯತೆ ಹೆಚ್ಚಾಗಿದೆ ಎಂದು ದೂರಿದರು.

ರಸ್ತೆ ಸುರಕ್ಷತಾ ತಜ್ಞರ ಪ್ರಕಾರ, ಭಾರತೀಯ ರಸ್ತೆ ಕಾಂಗ್ರೆಸ್ (ಐಆರ್‌ಸಿ) ಮಾರ್ಗಸೂಚಿಗಳಂತೆ ನಗರ ರಸ್ತೆಯಲ್ಲಿ 50★60 ಕಿ.ಮೀ ವೇಗಕ್ಕೆ ಕನಿಷ್ಠ 60 ರಿಂದ 90 ಮೀಟರ್ ನಿಲ್ಲುವ ದೃಶ್ಯ ದೂರ ಕಡ್ಡಾಯ. ಜೊತೆಗೆ ಸಿಗ್ನಲ್ ಬಳಿ ವಾಹನ ಸಾಲ ನಿಲ್ಲಿಸಲು ಸಮರ್ಪಕ ಜಾಗ ಒದಗಿಸಬೇಕು. ಹೆಚ್ಚಿನ ಸಂಚಾರವಿರುವ ನಗರ ಜಂಕ್ಷನ್‌ಗಳಲ್ಲಿ ಸಾಮಾನ್ಯವಾಗಿ 150 ರಿಂದ 200 ಮೀಟರ್ ವರೆಗೆ ವಾಹನ ಸಾಲಿಗೆ ಜಾಗ ಇರಬೇಕು. ಆದರೆ ಎನ್.ಆರ್. ಸರ್ಕಲ್‌ನಲ್ಲಿ ಈ ನಿಯಮ ಪಾಲನೆಯಾಗುತ್ತಿಲ್ಲ ಎಂಬುದು ಸ್ಪಷ್ಟವಾಗಿದೆ ಎಂದರು.

ಸಾರ್ವಜನಿಕರ ಸುರಕ್ಷತೆ ಹಿತದೃಷ್ಟಿಯಿಂದ ಸಂಬಂಧಪಟ್ಟ ಇಲಾಖೆಗಳು ತಕ್ಷಣ ಸ್ಥಳ ಪರಿಶೀಲನೆ ನಡೆಸಿ, ಸೇವಾ ರಸ್ತೆ ಮುಖ್ಯ ರಸ್ತೆಯ ಮರು ಹೊಂದಾಣಿಕೆ, ಟೋ ವಾಲ್ ವಿನ್ಯಾಸ ಪರಿಷ್ಕರಣೆ, ಸಂಚಾರ ಸಿಗ್ನಲ್ ಸ್ಥಳ ಬದಲಾವಣೆ, ರಸ್ತೆ ವಿನ್ಯಾಸ ಸುಧಾರಣೆ, ಮುನ್ನೆಚ್ಚರಿಕೆ ಸೂಚನಾ ಫಲಕಗಳ ಅಳವಡಿಕೆ ಹಾಗೂ ಗರಿಷ್ಠ ಸಮಯದಲ್ಲಿ ಸಂಚಾರ ಸಿಬ್ಬಂದಿ ನಿಯೋಜನೆ ಮಾಡಬೇಕು ಎಂದು ಆಗ್ರಹಿಸಿದರು.ಈ ಬಗ್ಗೆ ಮುಂದಿನ 15 ದಿನದಲ್ಲಿ ಸ್ಪಂದಿಸದಿದ್ದರೆ ಮುಂದಿನ ಹೋರಾಟಕ್ಕೆ ಅಣಿಯಾಗುವುದಾಗಿ ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಹೆಚ್.ಡಿ. ದೀಪಕ್ ಜೈನ್, ಎಸ್.ಡಿ. ಚಂದ್ರು, ಪ್ರೀತಿವರ್ಧನ್, ಗುರುಪ್ರಸಾದ್, ಪ್ರಸನ್ನ ಕುಮಾರ್ ಇದ್ದರು.

# ಆರೋಗ್ಯ ಸಮಸ್ಯೆ ತಡೆಗೆ ಪೋಲಿಯೋ ಹನಿ ಹಾಕಿಸಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮಕ್ಕಳಲ್ಲಿ ಆರೋಗ್ಯ ಸಮಸ್ಯೆಗಳು ಬರದಂತೆ ತಡೆಗಟ್ಟುವ ನಿಟ್ಟಿನಲ್ಲಿ ಎಚ್ಚರಿಕೆ ವಹಿಸಿ ಪ್ರತಿಯೊಬ್ಬ ತಾಯಂದಿರು ಪೋಲಿಯೋ ಲಸಿಕೆ ಹಾಕಿಸಬೇಕು ಎಂದು ಶಾಸಕ ಹೆಚ್.ಪಿ.ಸ್ವರೂಪ್ ತಿಳಿಸಿದರು.



ನಗರದ ಹಿಮ್ಸ್ ಆವರಣದಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಭಾನುವಾರ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಪೋಲಿಯೋ ಲಸಿಕೆ ಬಹಳ ಮುಖ್ಯ. 5 ವರ್ಷದೊಳಗಿನ ಮಕ್ಕಳಿಗೆ ಎಲ್ಲಾ ತಾಯಂದಿರು ತಪ್ಪದೆ ಪೊಲಿಯೋ ಲಸಿಕೆ ಹಾಕಿಸುವ ಮೂಲಕ ಅಭಿಯಾನವನ್ನು ಯಶಸ್ವಿಗೊಳಿಸುವಂತೆ ಕೋರಿದ ಅವರು, ವೈದ್ಯರ ಹೇಳಿಕೆಯಂತೆ ಮಗುವಿಗೆ ಕೆಮ್ಮು, ಶೀತ, ಜ್ವರ ಇದ್ದರು ಸಹ ಲಸಿಕೆ ಹಾಕಿಸಬೇಕು ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಮಾತನಾಡಿ, ಪೋಲಿಯೋ ಮುಕ್ತ ಸಮಾಜ, ಆರೋಗ್ಯವಂತ ಸಮಾಜದ ಸೂಚಕವಾಗಿದೆ. ಜಿಲ್ಲೆಯಲ್ಲಿರುವ 5 ವರ್ಷದೊಳಗಿನ ಮಕ್ಕಳಿಗೆ ಕಡ್ಡಾಯವಾಗಿ ಪಲ್ಸ್ ಪೋಲಿಯೋ ಲಸಿಕೆ ಹಾಕಿಸುವುದರ ಮೂಲಕ ಮಗುವಿನ ಉಜ್ವಲ ಭವಿಷ್ಯ ರೂಪಿಸಿ ಎಂದು ಪೋಷಕರಲ್ಲಿ ಮನವಿ ಮಾಡಿದರು.

ಜಿಲ್ಲಾದ್ಯಂತ ಡಿ.21 ರಂದು ಪಲ್ಸ್ ಪೋಲಿಯೋ ಕಾರ್ಯಕ್ರಮದಡಿಯಲ್ಲಿ ಎರಡು ಹನಿಗಳು- ಪೋಲಿಯೋ ವಿರುದ್ಧ ನಿರಂತರ ಗೆಲುವು ಎಂಬ ಘೋಷ ವಾಕ್ಯದೊಂದಿಗೆ ಲಸಿಕಾ ಕಾರ್ಯಕ್ರಮ ಆಯೋಜಿಸಲಾಗಿದೆ. 5 ವರ್ಷದೊಳಗಿನ ಮಕ್ಕಳ ತಂದೆ ತಾಯಿಗಳು ಮತ್ತು ಪೋಷಕರು ತಪ್ಪದೆ ತಮ್ಮ ಹತ್ತಿರದ ಪಲ್ಸ್ ಪೋಲಿಯೋ ಬೂತ್‌ಗಳಿಗೆ ಮಕ್ಕಳನ್ನು ಕರೆದುತಂದು ಲಸಿಕೆ ಹಾಕಿಸುವಂತೆ ತಿಳಿಸಿದರು.

5 ಬೂತ್‌ಗಳಿಗೆ ಒಬ್ಬರಂತೆ 174 ಮೇಲ್ವಿಚಾರಕರು ನಗರ ಪ್ರದೇಶ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ತಾಲ್ಲೂಕುವಾರು ಪಲ್ಸ್ ಪೋಲಿಯೋ ಕ್ರಿಯಾ ಯೋಜನೆಯಂತೆ ಕಾರ್ಯನಿರ್ವಹಿಸಲಿದ್ದಾರೆ. ಅದರಲ್ಲಿ ಗ್ರಾಮೀಣ ಪ್ರದೇಶದಲ್ಲಿ 3 ದಿನ ಹಾಗೂ ನಗರ ಪ್ರದೇಶದಲ್ಲಿ 4 ದಿನಗಳು ಮನೆ ಭೇಟಿ ಮಾಡುವ ಮೂಲಕ ಲಸಿಕೆ ಪಡೆಯಲು ಬಿಟ್ಟು ಹೋದ ಮಕ್ಕಳಿಗೂ ಲಸಿಕೆ ಹಾಕಲಾಗುತ್ತದೆ ಎಂದು ತಿಳಿಸಿದರು.

ಜಿಲ್ಲೆಯ 8 ತಾಲ್ಲೂಕಿನಲ್ಲಿ ವಿಶೇಷವಾಗಿ ಒಟ್ಟು 7 ಸಂಚಾರಿ ತಂಡ ಮತ್ತು ಒಟ್ಟು 22 ಟ್ರಾನ್ಸಿಟ್ ಪಾಯಿಂಟ್ ಬೂತ್‌ಗಳನ್ನು ಬಸ್ ನಿಲ್ದಾಣ, ರೈಲ್ವೆ ಸ್ಟೇಷನ್, ದೇವಸ್ಥಾನ, ರಿಂಗ್ ರೋಡ್, ಟೋಲ್‌ಗೇಟ್ ಗಳಲ್ಲಿ ಸ್ಥಾಪಿಸಲಾಗಿದ್ದು, 0-5 ವರ್ಷದ ಮಕ್ಕಳನ್ನು ಗುರುತಿಸಿ ಪೋಲಿಯೋ ಹನಿಯನ್ನು ನೀಡಲಾಗುವುದು. ಆರೋಗ್ಯ ಇಲಾಖೆಯಿಂದ ಮೇಲ್ವಿಚಾರಣೆ ನಡೆಸಲು ಎಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳನ್ನು ಮತ್ತು ಸಿಬ್ಬಂದಿ ಗಳನ್ನು ತಾಲ್ಲೂಕುವಾರು ನೋಡೆಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ ಎಂದು ಹೇಳಿದರು.

ಐಎಂಎ ಅಧ್ಯಕ್ಷ ಡಾ.ದಿನೇಶ್ ಮಾತನಾಡಿ, ಪಲ್ಸ್ ಪೋಲಿಯೋ ಲಸಿಕೆಯನ್ನು 1995 ರಿಂದ ಹಾಕಲಾಗುತ್ತಿದೆ. ದೇಶದಲ್ಲಿ 2011ರಲ್ಲಿ ಒಂದು ಪ್ರಕರಣ ವರದಿಯಾಗಿದೆ. 2014 ರಲ್ಲಿ ಪೋಲಿಯೋ ಮುಕ್ತ ಭಾರತ ಎಂದು ಘೋಷಿಸಲಾಗಿದ್ದು, ಇದು ಎಲ್ಲಾರ ಸಹಕಾರದಿಂದ ಸಾಧ್ಯವಾಗಿದೆ. ಪ್ರಸ್ತುತ ಅಫ್ಘಾನಿಸ್ತಾನ್, ಪಾಕಿಸ್ತಾನದಲ್ಲಿ ಮಾತ್ರ ಪೋಲಿಯೋ ಪ್ರಕರಣಗಳು ಇದೆ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅನಿಲ್, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ನಾಗಪ್ಪ, ಡಾ.ಚನ್ನವೀರಪ್ಪ,ಡಾ.ಶಿವಶಂಕರ್, ಡಾ. ಮನುಪ್ರಕಾಶ್ ಮತ್ತಿತರರು ಹಾಜರಿದ್ದರು.

## ಜಿಲ್ಲೆಯಲ್ಲಿ 1.06 ಲಕ್ಷ ಮಕ್ಕಳ ಗುರಿ

ಜಿಲ್ಲೆಯಲ್ಲಿ 0-5 ವರ್ಷದೊಳಗಿನ 1,06,747 ಮಕ್ಕಳ ಗುರಿ ಹೊಂದಿದ್ದು ಮತ್ತು 4,68,493 ಮನೆಗಳನ್ನು ತಲುಪುವ ಗುರಿ ಹೊಂದಲಾಗಿದೆ. ಇಂದು ನಗರ ಪ್ರದೇಶದಲ್ಲಿ 140 ಮತ್ತು ಗ್ರಾಮೀಣ ಪ್ರದೇಶದಲ್ಲಿ 732 ಸೇರಿ ಒಟ್ಟು 872 ಬೂತ್‌ಗಳಲ್ಲಿ ಲಸಿಕೆ ಹಾಕಲಾಗುತ್ತಿದೆ. ನಂತರ ಎರಡನೇ ದಿನದಿಂದ ಒಂದು ತಂಡದಲ್ಲಿ 2 ಸದಸ್ಯರಂತೆ 1744 ತಂಡಗಳು ಮನೆ ಮನೆ ಭೇಟಿ ಮಾಡಲಿದ್ದಾರೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

# ಪೋಲಿಯೋ ಹನಿ ಹಾಕಿಸಲು ನಿರ್ಲಕ್ಷ್ಯ ವಹಿಸದಿರಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ಈಗಾಗಲೇ ಪೋಲಿಯೋ ಮುಕ್ತ ರಾಷ್ಟ್ರ ಭಾರತವಾಗಿದ್ದರು ತಮ್ಮ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಿಸುವುದರಲ್ಲಿ ತಾತ್ಸಾರ ಮನೋಭಾವ ಬೇಡ ಎಂದು ತಹಶೀಲ್ದಾರ್ ಸಂತೋಷ್ ಕುಮಾರ್ ಕಿವಿಮಾತು ಹೇಳಿದರು.

ತಾಲೂಕು ಆಡಳಿತ, ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ರೋಟರಿ ಸಂಸ್ಥೆ ವತಿಯಿಂದ ಏರ್ಪಡಿಸಿದ್ದ ನಗರದ ಸರ್ಕಾರಿ ಜಯಚಾಮರಾಜೇಂದ್ರ ಆಸ್ಪತ್ರೆಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪುಟಾಣಿ ಚೈತನ್ಯಾಗೆ ಪೋಲಿಯೋ ಲಸಿಕೆ ಹಾಕುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.

ಆರೋಗ್ಯವಂತ ಸಮಾಜದಿಂದ ಮಾತ್ರ ಸದೃಢ ಭಾರತ ನಿರ್ಮಾಣ ಸಾಧ್ಯ ಈ ನಿಟ್ಟಿನಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಪೋಲಿಯೋ ಲಸಿಕೆ ಅಭಿಯಾನ ಸೇರದಂತೆ ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡುತ್ತಿದ್ದು ಸರ್ಕಾರಗಳ ಜೊತೆ ಪ್ರಗತಿಪರ ಸಂಘಟನೆಗಳು ಕೈಜೋಡಿಸುತ್ತಿರುವುದು ಸಂತಸದ ವಿಷಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದರು.

ತಾಲೂಕು ವೈದ್ಯಾಧಿಕಾರಿ ಡಾ. ರಂಗನಾಥ್ ಮಾತನಾಡಿ, ನಗರ ಸೇರಿ ತಾಲೂಕಿನ ಅತ್ಯಂತ ಐದು ವರ್ಷ ಒಳಪಟ್ಟ 17,600 ಮಕ್ಕಳಿದ್ದು ಪ್ರತಿಯೊಂದು ಮಗುವಿಗೂ




ಕಡ್ಡಾಯವಾಗಿ ಪೋಲಿಯೋ ಲಸಿಕೆ ಹಾಕಲು ತಾಲೂಕು ಆಡಳಿತ ರೋಟರಿ ಸಂಸ್ಥೆ ಜೊತೆಗೂಡಿ ಆರೋಗ್ಯ ಇಲಾಖೆ ಸಕಲ ಸಿದ್ಧತೆ ಮಾಡಿಕೊಂಡಿದೆ.

ಸಾರಿಗೆ ಬಸ್ ನಿಲ್ದಾಣ ರೈಲ್ವೆ ನಿಲ್ದಾಣ ಒಳಗೊಂಡಿದೆ. 150 ಕೇಂದ್ರಗಳಲ್ಲಿ ಮಕ್ಕಳಿಗೆ ಲಸಿಕೆಯಾಗಲು ಸಿದ್ಧತೆ ಮಾಡಿಕೊಂಡಿದ್ದು 650ಕ್ಕೂ ಹೆಚ್ಚು ಸಿಬ್ಬಂದಿ ಅಭಿಯಾನದಲ್ಲಿ ಪಾಲ್ಗೊಂಡಿದ್ದಾರೆ ಎಂದು ಮಾಹಿತಿ ನೀಡಿದರು.

ರೋಟರಿ ಸಂಸ್ಥೆಯ ಸಹಾಯಕ ಗವರ್ನರ್ ಬಿ.ಕೆ. ಯೋಗೀಶಾಚಾರ್ ಮಾತನಾಡಿ, ಆರೋಗ್ಯ, ಪರಿಸರ, ಶಿಕ್ಷಣ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ರೋಟರಿ ಸಂಸ್ಥೆ ರಾಷ್ಟ್ರ ಅಂತಾರಾಷ್ಟ್ರೀಯ ಮಟ್ಟದಲ್ಲಿ ಸೇವೆ ಸಲ್ಲಿಸುತ್ತಿದೆ. ಅದೇ ರೀತಿ ದೇಶದಲ್ಲಿ ಪೋಲಿಯೋ ಅಭಿಯಾನಕ್ಕೆ ಕೈಜೋಡಿಸುವ ಮೂಲಕ ಸಮಾಜಮುಖಿ ಸೇವೆಯಲ್ಲಿ ರೋಟರಿ ದೊಡ್ಡ ಕಾಣಿಕೆ ನೀಡುತ್ತಾ ಬಂದಿದೆ ಎಂದರು.

# ಕಾಚೇನಹಳ್ಳಿ ಯೋಜನೆಯಿಂದ ಕೃಷಿಗೆ ಅನುಕೂಲ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಕಾಚೇನಹಳ್ಳಿ ಏತ ನೀರಾವರಿ ಯೋಜನೆಯಿಂದ ತಾಲೂಕಿನ ದಂಡಿಗನಹಳ್ಳಿ ಹೋಬಳಿಯ ಸಾಕಷ್ಟು ಗ್ರಾಮಗಳ ಅಂತರ್ಜಲ ವೃದ್ಧಿಯಾಗಿದೆ ಎಂದು ಕುಂದೂರು ಗ್ರಾಮ ಪಂಚಾಯಿತಿ ಅಧ್ಯಕ್ಷ ಡಿ.ಎಲ್. ಮಧು ತಿಳಿಸಿದರು.



ತಾಲೂಕಿನ ದಂಡಿಗನಹಳ್ಳಿ ಹೋಬಳಿ ದೊಡ್ಡಕರಡೇವು ಗ್ರಾಮದ ದೊಡ್ಡಕೆರೆ ಹಾಗೂ ಬೇರಿಕಟ್ಟೆ ಭರ್ತಿಯಾದ ಹಿನ್ನೆಲೆಯಲ್ಲಿ ಬಾಗಿನ ಅರ್ಪಿಸಿ ಮಾತನಾಡಿದರು. ಕ್ಷೇತ್ರದ ಶಾಸಕರಾದ ಹೆಚ್.ಡಿ.ರೇವಣ್ಣ ಅವರ ಶ್ರಮದಿಂದ ದಂಡಿಗನಹಳ್ಳಿ ಹೋಬಳಿಯ ಸಾಕಷ್ಟು ಗ್ರಾಮಗಳ ಕೆರೆಗೆ ಹೇಮಾವತಿ ನದಿ ನೀರು ಹರಿಯುತ್ತಿದೆ. ಅದರಿಂದ ಸಾವಿರಾರು ಮಂದಿ ರೈತರು ನೆಮ್ಮದಿಯಾಗಿ ಬದುಕು ಕಟ್ಟಿಕೊಂಡಿದ್ದಾರೆ ಎಂದರು.

ಕಾಚೇನಹಳ್ಳಿ ಮೊದಲ ಹಂತದ ಏತ ನೀರಾವರಿಯಿಂದ ರಾಷ್ಟ್ರೀಯ ಹೆದ್ದಾರಿ ದಾಟಲು ಆಗಲಿಲ್ಲ. ಎರಡನೇ ಹಂತದಿಂದ ಅಣ್ಣೇನಹಳ್ಳಿ, ಅಪ್ಪೇನಹಳ್ಳಿ ವರೆಗೆ ನೀರು ಹರಿದು ಇದೀಗ ದೊಡ್ಡ ಕರಡೇವು ಗ್ರಾಮದ ಕೆರೆ ಭರ್ತಿಯಾಗಿದೆ. ಈ ಮೂಲಕ ಮೂರನೇ ಹಂತದ ಏತ ನೀರಾವರಿ ಕಾಮಗಾರಿ ಮುಗಿದ ಮೇಲೆ ಅರಸೀಕೆರೆ ತಾಲೂಕಿನ ಗಂಡಸಿ ಹೋಬಳಿಯ ಸಾಕಷ್ಟು ಹಳ್ಳಿಗಳಿಗೂ ಅದರ ಲಾಭವಾಗುತ್ತದ. ಏತ ನೀರಾವರಿಗಳು ಬರಡು ಭೂಮಿಗೆ ಜೀವ ಜಲವಾಗಿದೆ. ಕೃಷಿ ಚಟುವಟಿಕೆ, ಹೈನುಗಾರಿಕೆ ಮಾಡುವುದರ ಜೊತೆಯಲ್ಲಿ ತೋಟಗಾರಿಕೆ ಬೆಳೆಗಳಿಗೆ ಅನುಕೂಲ ಆಗುತ್ತಿವೆ ಎಂದು ತಿಳಿಸಿದರು.

ದೊಡ್ಡಕರಡೇವು ಗ್ರಾಮದ ಕೆರೆ ಭರ್ತಿಯಾದ ಮೇಲೆ ಹೆಚ್ಚುವರಿ ನೀರು ಮದಲಾಪುರ, ತಿಮ್ಲಾಪುರ, ಯಲಿಯೂರು, ಬರಗೂರು, ಗೆಜ್ಜಗಾರನಹಳ್ಳಿ, ಕತ್ತರಿಘಟ್ಟ ಗ್ರಾಮದ ಕೆರೆಗಳಿಗೆ ಹರಿಯುವ ಮೂಲಕ ಸಾಕಷ್ಟು ಕೃಷಿ ಭೂಮಿಯಲ್ಲಿ ಕೊಳವೆ ಬಾವಿ ಅಂತರ್ಜಲ ವೃದ್ಧಿಯಾಗುತ್ತಿದೆ ಎಂದು ಹೇಳಿದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಮಲ್ಲೇಶ್, ಶಿವನಂಜಮ್ಮ, ನಂಜಪ್ಪ, ಎಪಿಎಂಸಿ ಮಾಜಿ ನಿರ್ದೇಶಕ ಸತೀಶ್, ತಾಲೂಕು ಪಂಚಾಯಿತಿ ಮಾಜಿ ಸದಸ್ಯ ರವೀಶ್, ಕುಂದೂರು ಪಿಎಸಿಸಿಎಸ್ ಅಧ್ಯಕ್ಷ ಹರೀಶ್, ನಿರ್ದೇಶಕರಾದ ಜಯಲಕ್ಷ್ಮೀ, ಸತೀಶ್, ಗ್ರಾಮ ಅರಣ್ಯ ಸಮಿತಿ ಅಧ್ಯಕ್ಷ ವೆಂಕಟರಮಣಸ್ವಾಮಿ, ಪಿಎಸಿಸಿಎಸ್ ಮಾಜಿ ಅಧ್ಯಕ್ಷ ಮಂಜಣ್ಣ, ಮುಖಂಡರಾದ ದಿನೇಶ್, ನಾಗೇಂದ್ರ, ಪರಮೇಶ್, ವಿಕಾಸ್ ಉಪಸ್ಥಿತರಿದ್ದರು.

# ಸಂಘ ಸಂಸ್ಥೆ ಪಾರದರ್ಶಕವಾಗಿರಲು ಶಿಸ್ತು ಮುಖ್ಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸಂಘ ಸಂಸ್ಥೆಯಲ್ಲಿ ಬಹಳ ವರ್ಷಗಳ ಕಾಲ ಆರ್ಥಿಕ ಶಿಸ್ತು ಕಾಪಾಡಿಕೊಂಡು, ಸಮತೋಲನದಲ್ಲಿ ಸರಿದೂಗಿಸಿಕೊಂಡು ಹೋಗುವುದು ಕಷ್ಟದ ಕೆಲಸ. ಆ ನಡುವೆಯೂ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮುನ್ನಡೆಯುವುದು ಸಂತೋಷದ ವಿಚಾರ ಎಂದು ಜಿಲ್ಲಾ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಜೆ.ಆರ್.ಕೆಂಚೇಗೌಡ ಹೇಳಿದರು.



ನಗರದ ಖಾಸಗಿ ಹೋಟೆಲ್ ನಲ್ಲಿ ರಾಜ್ಯ ಸರ್ಕಾರಿ ನೌಕರರ ಕೋ-ಆಪರೇಟಿವ್ ಸೊಸೈಟಿ, ಸರ್ಕಾರಿ, ಅರೆ ಸರ್ಕಾರಿ ಹಾಗೂ ನಿಗಮ ಮಂಡಳಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘದಿಂದ ಹಮ್ಮಿಕೊಂಡಿದ್ದ ನೂತನ ವರ್ಷದ ಕ್ಯಾಲೆಂಡರ್ ಬಿಡುಗೊಳಿಸಿ ಮಾತನಾಡಿದ ಅವರು, ಸಂಘ-ಸಂಸ್ಥೆಗಳನ್ನು ಉತ್ಸಾಹದಲ್ಲಿ ಪ್ರಾರಂಭ ಮಾಡಬಹುದು. ಆದರೆ, ಬಹಳ ವರ್ಷಗಳ ಕಾಲ ಹಿಡಿದಿಟ್ಟುಕೊಳ್ಳುವುದು ಕಷ್ಟದ ಕೆಲಸ. ಎಲ್ಲಾ ಸಂಘ ಸಂಸ್ಥೆಯಲ್ಲೂ ಪರ-ವಿರೋಧ, ಜಾತಿ ಕೆಲಸ ಮಾಡುವುದರಿಂದ ಸರಿದೂಗಿಸಿಕೊಂಡು ಹೋಗುವುದು ಮುಖ್ಯ ಎಂದರು.

ಸರ್ಕಾರಿ, ಅರೆ ಸರ್ಕಾರಿ ಹಾಗೂ ನಿಗಮ ಮಂಡಳಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ಅಧ್ಯಕ್ಷ ಕೆ.ಎಂ.ಶ್ರೀನಿವಾಸ್ ಮಾತನಾಡಿ, ನಮ್ಮ ಗೃಹ ನಿರ್ಮಾಣ ಸಹಕಾರ ಸಂಘ ಪ್ರಾರಂಭವಾಗಿ 7 ವರ್ಷಗಳೆ ಕಳೆದಿದೆ. ಬಡಾವಣೆ ನಿರ್ಮಿಸಿ ಸಾರ್ವಜನಿಕವಾಗಿ ಮತ್ತು ನಮ್ಮ ಸಿ ಗ್ರೂಪ್ ನೌಕರರಿಗೆ ಕೈಗೆಟಕುವ ದರದಲ್ಲಿ ನಿವೇಶನಗಳನ್ನು ಸದಸ್ಯರಿಗೆ ಕೊಡುತ್ತಾ ಬಂದಿದ್ದೇವೆ. ಈಗಾಗಲೇ 500 ನಿವೇಶನಗಳನ್ನು ಸದಸ್ಯರಿಗೆ ನೀಡಿದ್ದು, ಯಾವುದೇ ದಲ್ಲಾಳಿಗಳ ಹಾವಳಿ ಇಲ್ಲದೇ ಹೆಚ್ಚಿನ ಬೆಲೆ ನೀಡದ ರೀತಿ ಕಂತಿನ ಬೆಲೆಯಲ್ಲಿ ಸಿಗುವಂತೆ ನೋಡಿಕೊಂಡಿದ್ದೇವೆ. ಮುಂದೆ ಇನ್ನು ಹಲವಾರು ನಿವೇಶನ ಕೊಡುವ ಗುರಿ ಹೊಂದಿದ್ದೇವೆ. ಪ್ರಸ್ತುತ 4 ಕೋಟಿ ಸಾಲವನ್ನು ನಮ್ಮ ಕೋ-ಆಪರೇಟಿವ್ ಸೊಸೈಟಿ ನೀಡಿದೆ. ಮುಂದಿನ ದಿನಗಳಲ್ಲಿ ಎರಡು ಬಡಾವಣೆಗಳಲ್ಲೂ ಕಡಿಮೆ ದರದಲ್ಲಿ ನಿವೇಶನ ಕೊಡಲಾಗುವುದು ಎಂದು ಹೇಳಿದರು.

ನಮ್ಮ ಸಂಘದ ಮೂಲಕ ಅನೇಕ ಸೇವಾ ಚಟುವಟಿಕೆಗಳನ್ನು ಮಾಡಿದ್ದೇವೆ. ಗಿಡಗಳನ್ನು ಬೆಳೆಸುವುದು, ಕ್ರೀಡಾ ಚಟುವಟಿಕೆ, ಸರ್ಕಾರಿ ಶಾಲೆ ವಿದ್ಯಾರ್ಥಿಗಳಿಗೆ ಪ್ರೋತ್ಸಹ ಧನ ನೀಡುವುದು ಹಾಗೂ ಹಸಿರು ಭೂಮಿ ಪ್ರತಿಷ್ಠಾನದ ಕೆಲಸಗಳಿಗೆ ನಾವು ಕೈಜೋಡಿಸುತ್ತಿದ್ದೇವೆ ಎಂದರು.

ಹಿರಿಯ ಪತ್ರಕರ್ತ ವೆಂಕಟೇಶ್, ಪತ್ರಕರ್ತರ ಸಂಘದ ಕಾರ್ಯದರ್ಶಿ ಹರೀಶ್, ಕೋ. ಆಪರೇಟಿವ್ ಸೊಸೈಟಿಯ ಅಧ್ಯಕ್ಷ ಎಂ.ಎನ್.ಪರಮೇಶ್, ಸರ್ಕಾರಿ ನೌಕರರ ಸಂಘದ ರಾಜ್ಯ ಪರಿಷತ್ ಸದಸ್ಯ ಟಿ.ರಾಜು, ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳಾದ ಜಿ.ಪಿ.ವಿಶ್ವನಾಥ್, ಎಸ್.ಮಧು, ಗೋಪಾಲಕೃಷ್ಣ, ಆರ್.ಸಿ.ಸತೀಶ್, ಸಾವಿತ್ರಮ್ಮ, ದಾಕ್ಷಾಯಿಣಿ, ನಿರ್ದೇಶಕರು ಇದ್ದರು.

## ಡಿ. 24-25ರಂದು ರಕ್ಷಿದಿಯಲ್ಲಿ ನಾಟಕ ಪ್ರದರ್ಶನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಸಕಲೇಶಪುರ ತಾಲ್ಲೂಕಿನ ರಕ್ಷಿದಿ ಗ್ರಾಮದ ಪೂರ್ಣಚಂದ್ರ ತೇಜಸ್ವಿ ರಂಗ ಮಂದಿರದಲ್ಲಿ ಡಿ. 24 ಹಾಗು 25 ರಂದು ಬೆಳ್ಳೇಕೆರೆ ಜೈ ಕರ್ನಾಟಕ ಸಂಘದಿಂದ ನಾಟಕ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ.

ಕಾರ್ಕಳದ ಯಕ್ಷ ರಂಗಾಯಣದ ರೆಪರ್ಟರಿ ಕಲಾವಿದರು ಗುಲಾಮನ ಸ್ವಾತಂತ್ರ್ಯ ಯಾತ್ರೆ (ಬುಧವಾರ ಸಂಜೆ 7) ಹಾಗೂ ಮಹಾತ್ಮರ ಬರವಿಗಾಗಿ (ಗುರುವಾರ ಸಂಜೆ 7) ಎಂಬ ನಾಟಕ ಪ್ರದರ್ಶನವಾಗಲಿದೆ. ಪ್ರವೇಶ ಉಚಿತವಾಗಿದ್ದು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಹಿರಿಯ ರಂಗಕರ್ಮಿ ಪ್ರಸಾದ್ ರಕ್ಷಿದಿ ಕೋರಿದ್ದಾರೆ.

## 60 ಸಾವಿರ ರೂ. ಮೌಲ್ಯದ 4 ಕುರಿ ಕಳವು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಮನೆಯ ಕಾಂಪೌಂಡ್‌ನಲ್ಲಿ ಕಟ್ಟಿ ಹಾಕಿದ್ದ 4 ಕುರಿಗಳನ್ನು ರಾತ್ರೋರಾತ್ರಿ ಕಳವು ಮಾಡಿರುವ ಘಟನೆ ಹಳೇಬೀಡಿನಲ್ಲಿ ನಡೆದಿದೆ.

ಜಿ.ಎಂ.ಸುದೀಪ್ ಎಂಬುವವರ ಮನೆಯಲ್ಲಿ ಡಿ. 18ರ ರಾತ್ರಿ ಕಳ್ಳತನವಾಗಿದೆ. ಮಧ್ಯರಾತ್ರಿ 1 ಗಂಟೆ ಸಮಯದಲ್ಲಿ ಒಂದು ಕುರಿ ಜೋರಾಗಿ ಕೂಗಾಡಿದ್ದರಿಂದ ಸುದೀಪ್ ಅವರು ಎದ್ದು ಬಾಗಿಲು ತೆರೆಯಲು ಬಂದಾಗ ಹೊರಗಿನಿಂದ ಚಿಲಕ ಹಾಕಲಾಗಿತ್ತು. ಕಿಟಕಿಯಿಂದ ನೋಡಿದಾಗ ಕಾರಿನಲ್ಲಿ ಬಂದಿದ್ದ ಮುಸುಕುಧಾರಿಗಳು ನಾಲ್ಕು ಕುರಿಗಳನ್ನು ಕಾರಿಗೆ ಹಾಕಿ ಅಲ್ಲಿಂದ ಎಸ್ಕೇಪ್ ಆಗಿದ್ದಾರೆ. ಕಾಂಪೌಂಡ್‌ನಲ್ಲಿದ್ದ ಐದು ಕುರಿಗಳ ಪೈಕಿ ಒಂದನ್ನು ಮಾತ್ರ ಬಿಟ್ಟಿದ್ದಾರೆ. ಕಳುವಾಗಿರುವ 4 ಕುರಿಗಳ ಬೆಲೆ ಸುಮಾರು 60 ಸಾವಿರ ರೂ. ಆಗಿದೆ. ಹಳೇಬೀಡು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಇತಿಹಾಸದಲ್ಲಿ ಈ ದಿನ

### ಡಿಸೆಂಬರ್-23

1887: ಭಾರತದ ಪ್ರಸಿದ್ಧ ಕವಿ ಹಾಗೂ ಸಾಹಿತ್ಯ ವಿಮರ್ಶಕ ಸರೋಜಿನಿ ನಾಯ್ಡು ಜನಿಸಿದರು.

1910: ಜಪಾನ್‌ನ ಮಾಜಿ ಪ್ರಧಾನಿ ಹಾಗೂ ನೊಬೆಲ್ ಶಾಂತಿ ಪ್ರಶಸ್ತಿ ವಿಜೇತ ಐಸಾಕು ಸಾಟೋ ಜನನ.

1913: ವಿಶ್ವದ ಮೊದಲ ಸ್ಟೇನ್‌ಲೆಸ್ ಸ್ಟೀಲ್ ಉತ್ಪಾದನೆ ಯಶಸ್ವಿಯಾಗಿ ನಡೆಯಿತು.

1947: ಟ್ರಾನ್ಸಿಸ್ಟರ್ ಆವಿಷ್ಕಾರವನ್ನು ಅಧಿಕೃತವಾಗಿ ಜಗತ್ತಿಗೆ ಪರಿಚಯಿಸಲಾಯಿತು.

1972: ಅಮೆರಿಕದ ಅಪೋಲೊ17 ಚಂದ್ರಯಾನ ಮಿಷನ್ ಯಶಸ್ವಿಯಾಗಿ ಭೂಮಿಗೆ ವಾಪಸಾಯಿತು.

2007: ಭೂತಾನ್‌ನಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಅಧಿಕೃತವಾಗಿ ಜಾರಿಗೆ ಬಂದಿತು.

#### ಜನನ

1887: ಸರೋಜಿನಿ ನಾಯ್ಡು, ಪ್ರಸಿದ್ಧ ಭಾರತೀಯ ಕವಿ, ಸ್ವಾತಂತ್ರ್ಯ ಹೋರಾಟಗಾರ್ತಿ ಹಾಗೂ ಕಾಂಗ್ರೆಸ್ ಪಕ್ಷದ ಮೊದಲ ಮಹಿಳಾ ಅಧ್ಯಕ್ಷೆ

1910: ಐಸಾಕು ಸಾಟೋ, ಜಪಾನ್‌ನ ಮಾಜಿ ಪ್ರಧಾನಿ, ನೊಬೆಲ್ ಶಾಂತಿ ಪ್ರಶಸ್ತಿ ವಿಜೇತ

1933: ಅಕಿಹಿತೋ, ಜಪಾನ್‌ನ ಮಾಜಿ ಸಾಮ್ರಾಟ್

#### ಮರಣ


2004: ಪಾಮುಲಪರ್ತಿ ವೆಂಕಟ ನರಸಿಂಹ ರಾವ್, ಭಾರತದ ಮಾಜಿ ಪ್ರಧಾನಿ

2011: ಕಿಮ್ ಜಾಂಗ್‌ಇಲ್, ಉತ್ತರ ಕೊರಿಯಾದ ಮಾಜಿ ನಾಯಕ

# ಭಾರತ ಪೋಲಿಯೋ ಮುಕ್ತ ದೇಶವಾಗಲಿ: ಕೆಎಂಶಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ಪೋಲಿಯೋ ನಿರ್ಮೂಲನೆ ಸಮರೋಪಾದಿಯಲ್ಲಿ ನಡೆಯುತ್ತಿದೆ. ಭಾರತ ಪೋಲಿಯೋ ಮುಕ್ತ ದೇಶವಾಗಲು ಪ್ರತಿಯೊಬ್ಬರೂ ಸಹಕರಿಸಬೇಕೆಂದು ಗೃಹ ಮಂಡಳಿ ಅಧ್ಯಕ್ಷ ಕೆ.ಎಂ.ಶಿವಲಿಂಗೇಗೌಡ ಕೋರಿದರು.



ನಗರದ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಈ ಆಂದೋಲನದಲ್ಲಿ 5 ವರ್ಷದೊಳಗಿನ ಮಕ್ಕಳಿಗೆ ಕಡ್ಡಾಯವಾಗಿ ನೀಡಲಾಗುವ ಪೋಲಿಯೋ ಲಸಿಕೆಯಿಂದ ಮಕ್ಕಳು ಶಾಶ್ವತ ಅಂಗವಿಕಲರಾಗುವುದನ್ನು ತಪ್ಪಿಸಬಹುದು ಎಂದರು.

ಅರಸೀಕೆರೆ ತಾಲ್ಲೂಕಿನಲ್ಲಿ 5 ವರ್ಷದೊಳಗಿನ 17,562 ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆ ಹಾಕಲಾಗುತ್ತಿದೆ. ಪೋಲಿಯೋ ಮುಕ್ತವಾಗಿದ್ದರೂ ನಾವು ಸದಾ ಎಚ್ಚರಿಕೆಯಲ್ಲಿ ಇರಬೇಕು. ಪೋಷಕರು ತಮ್ಮ 5 ವರ್ಷದೊಳಗಿನ ಮಕ್ಕಳಿಗೆ ಕಡ್ಡಾಯವಾಗಿ ಲಸಿಕೆ ಹಾಕಿಸಲು ಮುಂದಾಗಬೇಕು. ಆರೋಗ್ಯ ಪೂರ್ಣ ಸಮಾಜ ನಿರ್ಮಾಣಕ್ಕೆ ಎಲ್ಲರ ಸಹಕಾರ ನಿರಂತರವಾಗಿರಲಿ ಎಂದು ಹೇಳಿದರು.

ತಾಲ್ಲೂಕಿನ ವೈದ್ಯರ ತಂಡ, ಆರೋಗ್ಯ ಇಲಾಖೆ ಸಿಬ್ಬಂದಿ, ರೋಟರಿ, ಲಯನ್ಸ್, ಇನ್ನರ್‌ವ್ಹೀಲ್ ಸೇರಿ ಸ್ವಯಂ ಸೇವಾ ಸಂಸ್ಥೆಗಳು, ರಕ್ಷಾ ಸಮಿತಿ ಸದಸ್ಯರು ಸೇರಿ ವಿವಿಧ ಸಂಘ-ಸಂಸ್ಥೆಗಳು ಅಧಿಕಾರಿಗಳ ಪಾತ್ರ ಅತಿ ಮುಖ್ಯವಾಗಿದೆ ಎಂದರು.

ತಹಶೀಲ್ದಾರ್ ಎಂ.ಜಿ. ಸಂತೋಷ್ ಕುಮಾರ್ ಮಾತನಾಡಿ, ತಾಲ್ಲೂಕಿನಾದ್ಯಂತ 78,720 ಕುಟುಂಬಗಳಿವೆ. ಅದರಲ್ಲಿ ನಗರ ಪ್ರದೇಶದಲ್ಲಿ 10,073 ಹಾಗೂ ಗ್ರಾಮೀಣ ಪ್ರದೇಶದಲ್ಲಿ 66,687 ಕುಟುಂಬಗಳಿವೆ. ಈ ಕುಟುಂಬಗಳಲ್ಲಿ 17,562 ಸಂಖ್ಯೆಯ 5 ವರ್ಷದೊಳಗಿನ ಮಕ್ಕಳಿದ್ದು, ನಗರ ಪ್ರದೇಶದಲ್ಲಿ 2900, ಗ್ರಾಮೀಣ ಪ್ರದೇಶಗಳಲ್ಲಿ 14,662 ಮಕ್ಕಳಿದ್ದಾರೆ. ಎಲ್ಲಾ ಮಕ್ಕಳಿಗೂ ಕಡ್ಡಾಯವಾಗಿ ಪೋಲಿಯೋ ಹನಿ ಹಾಕುವಂತಾಗಬೇಕು ಎಂದು ಹೇಳಿದರು.

ಜೆ.ಸಿ. ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿ ಡಾ.ಉಮೇಶ್, ಹಿರಿಯ ಆರೋಗ್ಯ ನಿರೀಕ್ಷಣಾ ಅಧಿಕಾರಿ ಡಾ.ಪ್ರದೀಪ್ ಕುಮಾರ್, ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಾತಾಧಿಕಾರಿ ಲೀಲಾವತಿ, ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ ರಾಘವ, ರಕ್ಷಾ ಸಮಿತಿ ಸದಸ್ಯರಾದ ಹೇಮಂತ್ ಕುಮಾರ್, ವಿಭವ್ ಇಟಗಿ, ಮಂಜುನಾಥ್ ಇದ್ದರು.

## ಕಾಫಿ ಬೀಜ ಕಳವಿಗೆ ಯತ್ನಿಸಿದ ವ್ಯಕ್ತಿಯನ್ನು ಪೊಲೀಸರಿಗೆ ಒಪ್ಪಿಸಿದ ಜನರು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಕಣದಲ್ಲಿ ಒಣಗಲು ಹಾಕಿದ್ದ ಕಾಫಿ ಬೀಜವನ್ನು ಕಳವು ಮಾಡಲು ಯತ್ನಿಸಿದ ವ್ಯಕ್ತಿಯನ್ನು ಗ್ರಾಮಸ್ಥರು ಹಿಡಿದು ಪೊಲೀಸರಿಗೆ ಒಪ್ಪಿಸಿರುವ ಘಟನೆ ತಾಲ್ಲೂಕಿನ ಚೋಕನಹಳ್ಳಿ ಗ್ರಾಮದಲ್ಲಿ ನಡೆದಿದೆ.



ಗ್ರಾಮದ ನಿವಾಸಿ ರುದ್ರೇಶ್‌ಗೌಡ ಕಳ್ಳತನಕ್ಕೆ ಯತ್ನಿಸಿದ ಆರೋಪಿ. ತಾಲೂಕಿನ ಯಮಸಂಧಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚೋಕನಹಳ್ಳಿ ಗ್ರಾಮದ ಗ್ರಾಮದ ನಂದೀಶ್ ಅವರಿಗೆ ಸೇರಿದ ಕಾಫಿ ತೋಟದ ಕಣದಲ್ಲಿ ಒಣಗಿಸಲು ಹಾಕಿದ್ದ ಕಾಫಿ ಬೀಜವನ್ನು ಅದೇ ಗ್ರಾಮದ ರುದ್ರೇಶ್‌ಗೌಡ ಎಂಬಾತ, ಶನಿವಾರ ರಾತ್ರಿ 10 ಗಂಟೆ ಸಮಯದಲ್ಲಿ ಸುಮಾರು 50 ಕೆ.ಜಿ. ಕಾಫಿ ಬೀಜ ತುಂಬಿದ ಚೀಲವನ್ನು ಕಳ್ಳತನ ಮಾಡಲು ಯತ್ನಿಸುತ್ತಿದ್ದ. ಈ ವೇಳೆ ತೋಟದ ಪಕ್ಕದಲ್ಲೇ ಮಲಗಿದ್ದ ನಂದೀಶ್ ಅವರಿಗೆ ನಾಯಿಗಳ ಬೊಗಳುವ ಶಬ್ದ ಕೇಳಿಸಿದೆ. ತಕ್ಷಣ ಎಚ್ಚರಗೊಂಡು ಸ್ಥಳಕ್ಕೆ ತೆರಳಿದಾಗ ಕಾಫಿ ಬೀಜ ಕಳ್ಳತನ ನಡೆಯುತ್ತಿರುವುದು ಗೊತ್ತಾಗಿದೆ. ತಕ್ಷಣವೇ ಗ್ರಾಮಸ್ಥರಿಗೆ ಮಾಹಿತಿ ನೀಡಿದ ಅವರು, ಗ್ರಾಮಸ್ಥರ ಸಹಕಾರದೊಂದಿಗೆ ಕಳ್ಳನನ್ನು ಹಿಡಿದು, ಥಳಿಸಿ, ಭಾನುವಾರ ಬೆಳಿಗ್ಗೆ, ಕಾಫಿ ಬೀಜಗಳ ಮಾಲಿನ ಸಮೇತ ಬೇಲೂರು ಪೊಲೀಸ್ ಠಾಣೆಗೆ ಒಪ್ಪಿಸಿದರು. ಈ ಸಂಬಂಧ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ

# ಸಮುದಾಯ ಏಳಿಗೆಗೆ ಸಂಘಟಿತ ಹೋರಾಟ ಅವಶ್ಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಆರ್ಥಿಕ, ಸಾಮಾಜಿಕ ಹಾಗು ಶೈಕ್ಷಣಿಕವಾಗಿ ಏಳಿಗೆ ಹೊಂದಲು ಸಂಘಟಿತ ಹೋರಾಟ ರೂಪಿಸಬೇಕೆಂದರೆ ಸಮುದಾಯದ ಪ್ರತಿಯೊಬ್ಬರು ಸದಸ್ಯತ್ವ ಪಡೆಯಬೇಕು. ಆ ಮೂಲಕ ಹೋರಾಟದಲ್ಲಿ ಕೈ ಜೋಡಿಸಬೇಕು ಎಂದು ಕರ್ನಾಟಕ ಮಾದರ ಮಹಾಸಭಾ ರಾಜ್ಯ ಸಮಿತಿ ಸದಸ್ಯ ಎಂ.ಆರ್. ವೆಂಕಟೇಶ್ ಹೇಳಿದರು.




ನಗರದ ಸ್ವಾಭಿಮಾನಿ ಭವನದಲ್ಲಿ ಸೋಮವಾರ ಆಯೋಜಿಸಿದ್ದ ಸದಸ್ಯತ್ವ ನೋಂದಣಿ ಹಾಗೂ ಸಮಿತಿ ರಚನೆ ಸಭೆಯಲ್ಲಿ ಮಾತನಾಡಿ, ಇಡೀ ರಾಜ್ಯದಲ್ಲಿ ಹೋರಾಟದಲ್ಲಿ ಮುಂಚೂಣಿಯಲ್ಲಿರುವುದು ಮಾದಿಗ ಸಮುದಾಯ. ಆ ನಿಟ್ಟಿನಲ್ಲಿ ಸಮುದಾಯವನ್ನು ವ್ಯವಸ್ಥಿತವಾಗಿ ಆರ್ಥಿಕ, ಶೈಕ್ಷಣಿಕ ಹಾಗೂ ಸಾಮಾಜಿಕವಾಗಿ ಮುಂಚೂಣಿಗೆ ತರುವ ನಿಟ್ಟಿನಲ್ಲಿ ರಾಜ್ಯ ನಾಯಕರಾದ ಕೆ.ಹೆಚ್.ಮುನಿಯಪ್ಪ, ನಾರಾಯಣಸ್ವಾಮಿ, ಹೆಚ್.ಆಂಜನೇಯ, ಗೋವಿಂದ ಕಾರಜೋಳ ಮೊದಲಾದವರು ಪಕ್ಷಾತೀತವಾಗಿ ಮಾದರ ಮಹಾಸಭಾ ರಚಿಸಿದ್ದಾರೆಂದರು.

ಈ ಮೂಲಕ ಸಮುದಾಯ ಕಟ್ಟುವ ಕೆಲಸಕ್ಕೆ ಮುಂದಾಗಿದ್ದು, ಸಮುದಾಯದ ಬಂಧುಗಳು ಸದಸ್ಯತ್ವ ಪಡೆದು ಸಭಾವನ್ನು ಸದೃಢಗೊಳಿಸಬೇಕು ಎಂದರು.

ಸದಸ್ಯತ್ವ ನೋಂದಣಿ ಸಂಪೂರ್ಣ ಆನ್‌ಲೈನ್ ಮೂಲಕ ನಡೆಯಲಿದ್ದು, ಆ ಮೂಲಕ ಸದಸ್ಯತ್ವ ಮಾಡಿಕೊಳ್ಳಬೇಕು. ಬೇರೆ ಯಾರಿಗೂ ಹಣ ನೀಡಿ ಮೋಸ ಹೋಗಬಾರದು. ಆನ್‌ಲೈನ್‌ನಲ್ಲಿ ನೋಂದಣಿಯಾಗಿ ಹಣ ಪಾವತಿ ಮಾಡಿದ ತಕ್ಷಣವೇ ಐಡಿ ಕಾರ್ಡ್ ಬರಲಿದ್ದು, ಅಲ್ಲಿಯೇ ಡೌನ್‌ಲೋಡ್ ಮಾಡಿಕೊಳ್ಳಬೇಕೆಂದರು.

ಮಹಾಸಭಾ ಜಿಲ್ಲಾಧ್ಯಕ್ಷ ವಿಜಯ್ ಕುಮಾರ್ ಮಾತನಾಡಿ, ಜಿಲ್ಲಾ-ತಾಲ್ಲೂಕು ಮಟ್ಟದ ಸಮಿತಿ ರಚನೆಯಾಗಿದ್ದು, ಒಂದು ವಿಧಾನಸಭಾ ಕ್ಷೇತ್ರದಲ್ಲಿ ತಲಾ 2 ಸಾವಿರ ಜನರನೋಂದಣಿ ಮಾಡಿಸಬೇಕು. ಸಮುದಾಯದ 1 ಕುಟುಂಬಕ್ಕೆ ಒಬ್ಬರಂತೆ 500 ರೂ. ನೀಡಿ ಸದಸ್ಯತ್ವ ಪಡೆಯಬೇಕು ಎಂದು ಕೋರಿದರು.

ಮಾದಾರ ಮಹಾಸಭಾವು ಅನೇಕ ಧ್ಯೇಯೋದ್ದೇಶ ಹೊಂದಿದ್ದು, ಸಮುದಾಯದ ಪರವಾಗಿ ಅದರಲ್ಲೂ ವಿದ್ಯಾರ್ಥಿಗಳ ಕಲ್ಯಾಣಕ್ಕೆ ಶ್ರಮಿಸಲಿದ್ದು, ಯುವ ಪೀಳಿಗೆಯನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡಿ, ಸದೃಢ ಸಮಾಜ ಕಟ್ಟುವ ಕೆಲಸವನ್ನು ಜಿಲ್ಲೆಯಲ್ಲಿ ರಾಜ್ಯ ನಾಯಕರ ನಿರ್ದೇಶನದಂತೆ ಮಾಡಬೇಕೆಂದರು.

ಮಾದರ ಮಹಾಸಭಾ ಪಾರದರ್ಶಕವಾಗಿ ಕೆಲಸ ಮಾಡಲಿದ್ದು, ಸಂಘದ ಆರ್ಥಿಕ ಸೇರಿ ಎಲ್ಲಾ ಕಾರ್ಯಗಳು ವೆಬ್‌ಸೈಟ್‌ನಲ್ಲಿ ಲಭ್ಯವಿದ್ದು, ಸರ್ವರೂ ವೀಕ್ಷಣೆ ಮಾಡಬಹುದು ಹಾಗು ಏನಾದರೂ ಗೊಂದಲಗಳಿದ್ದರೆ ಅಥವಾ ಆಕ್ಷೇಪಗಳಿದ್ದರೆ ನೇರವಾಗಿ ಸಂಪರ್ಕಿಸಿ ಪರಿಹರಿಸಿಕೊಳ್ಳಬಹುದು. ವಿದ್ಯಾರ್ಥಿಗಳು, ಯುವ ಮಿತ್ರರು ಸಂಘಟನೆ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ತಾಲ್ಲೂಕು-ಜಿಲ್ಲಾ ಮಟ್ಟಕ್ಕೆ ಪದಾಧಿಕಾರಿಗಳನ್ನು ಆಯ್ಕೆ ಮಾಡಿ ನೋಂದಣಿ ಅಭಿಯಾನವನ್ನು ರಾಜ್ಯ ಸಮಿತಿ ಸೂಚಿಸಿದಂತೆ ಸ್ಥಳದಲ್ಲೇ 500ಕ್ಕೂ ಸದಸ್ಯರು ನೋಂದಣಿ ಪಡೆದರು.

ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಮಂಜುನಾಥ್, ದೇವರಾಜ್, ಆಲೂರು ಹೇಮಂತ್, ಕೆಡಿಎಸ್‌ಎಸ್ ಜಿಲ್ಲಾ ಸಂಚಾಲಕ ವಿರೂಪಾಕ್ಷಿಪುರ ಪ್ರಕಾಶ್, ಸಫಾಯಿ ಕರ್ಮಚಾರ ಆಯೋಗದ ಜಿಲ್ಲಾ ಉಸ್ತುವಾರಿ ಶ್ರೀನಿವಾಸ್ ಚನ್ನರಾಯಪಟ್ಟಣ, ಬೈರೇಶ್, ಕುಮಾರಸ್ವಾಮಿ ದೊಡ್ಡಪುರ, ಮಹಿಳಾ ಮುಖಂಡರಾದ ವಸಂತಮ್ಮ ಇತರರಿದ್ದರು.

## ಬೀರುವಿನಲ್ಲಿಟ್ಟಿದ್ದ ಚಿನ್ನಾಭರಣ ಕಳವು

ಹಾಸನ: ಮನೆ ಛಾವಣಿಯಿಂದ ಬಂದ ಕಳ್ಳರು ನಗದು ಸೇರಿ 1.04 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿರುವ ಘಟನೆ ಬಿಟ್ಟಗೌಡನಹಳ್ಳಿ ಗ್ರಾಮದಲ್ಲಿ ನಡೆದಿದೆ.

ನಿವಾಸಿ ಚಂದ್ರಮ್ಮ ಅವರು ಡಿ. 20ರಂದು ಮನೆಗೆ ಬೀಗ ಹಾಕಿಕೊಂಡು ಮಂತ್ರಾಲಯಕ್ಕೆ ತೆರಳಿದ್ದರು. ಮಾರನೇ ದಿನ ಎದುರು ಮನೆಯ ಸಾಕಮ್ಮ ಎಂಬುವವರು ಕರೆ ಮಾಡಿ ವಿಷಯ ತಿಳಿಸಿದ್ದಾರೆ. ಅಡುಗೆ ಮನೆ ಛಾವಣಿ ಶೀಟ್ ತೆರೆದು ಒಳನುಗ್ಗಿರುವ ಕಳ್ಳರು ಬೀರುವಿನಲ್ಲಿಟ್ಟಿದ್ದ 4 ಗ್ರಾಂ ತೂಕದ 1 ಚಿನ್ನದ ಉಂಗುರ, 5 ಗ್ರಾಂ ತೂಕದ 1 ಚಿನ್ನದ ಉಂಗುರ, 100 ಗ್ರಾಂ ತೂಕದ ಒಂದು ಬೆಳ್ಳಿ ಲೋಟ, 150 ಗ್ರಾಂ ತೂಕದ ಒಂದು ಜೊತೆ ಬೆಳ್ಳಿ ದೀಪ ಹಾಗೂ 25 ಸಾವಿರ ರೂ. ದೋಚಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248